ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಹೊಸ ಕೈಗಾರಿಕಾ ನೀತಿಯನ್ನು ಜಾರಿಗೊಳಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

682 (764) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿಯನ್ನು ಜಾರಿಗೆ ತಂದಿದ್ದು, ಇದರ ಅನುಷ್ಠಾನಕ್ಕಾಗಿ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KIADB) ವತಿಯಿಂದ ಯಾವ ಯಾವ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ನಿರ್ಧರಿಸಲಾಗಿದೆ;

(ಆ) ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KIADB) ವತಿಯಿಂದ ಒಂದು ಪ್ರದೇಶವನ್ನು ಕೈಗಾರಿಕಾ ಪ್ರದೇಶವಾಗಿ ಅಭಿವೃದ್ಧಿಪಡಿಸಲು ಇರುವ ಮಾನದಂಡಗಳೇನು; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಹಿಂದುಳಿದ ಜಿಲ್ಲೆಗಳನ್ನು ವಿಶೇಷವಾಗಿ ಉತ್ತರ ಕರ್ನಾಟಕದ ಯಾವ ಯಾವ ಜಿಲ್ಲೆಗಳನ್ನು ಕೈಗಾರಿಕಾ ಪ್ರದೇಶಗಳಾಗಿ ಅಭಿವೃದ್ಧಿಪಡಿಸಲಾಗುವುದು;

(ಈ) ಹೊಸ ಕೈಗಾರಿಕಾ ನೀತಿಯನ್ವಯ ಉತ್ತರ ಕರ್ನಾಟಕದ ಹಿಂದುಳಿದ ಜಿಲ್ಲೆಗಳಲ್ಲಿ ಕೈಗಾರಿಕಾ ಪ್ರದೇಶಗಳಾಗಿ ಅಭಿವೃದ್ಧಿಪಡಿಸಲು ಸರ್ಕಾರ ತೆಗೆದಕೊಂಡ ಕ್ರಮಗಳೇನು; (ಪ್ರಗತಿಯು ಯಾವ ಹಂತದಲ್ಲಿದೆ)

(ಉ) ಯಾವ ಕಾಲಮಿತಿಯಲ್ಲಿ ಸದರಿ ಯೋಜನೆಗಳು ಅನುಷ್ಠಾನಗೊಂಡು ಸಕಾರಗೊಳ್ಳಲಿವೆ? (ವಿವರ ಒದಗಿಸುವುದು)